ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 03 ಬಿಎಲ್‌ಡಿ 2017
ಅಡಕ:

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ:16-08-2018.

**ಇವರಿಗೆ,**

**ಪ್ರಾಚಾರ್ಯರು** ,ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ, ಕೆ.ಆರ್.ಪೇಟೆ, ಚಾಮರಾಜನಗರ, ಕುಶಾಲನಗರ, ಹಾವೇರಿ, ರಾಮನಗರ, ರಾಯಚೂರು, ಹೂವಿನಹಡಗಲಿ, ಕಾರವಾರ, **ವಿಶೇಷಾಧಿಕಾರಿ/ಪ್ರಭಾರ ಪ್ರಾಂಶುಪಾಲರು**,ಸರ್ಕಾರಿ ಇಂಜಿನಿಯರಿಂಗ್ ಕಾಲೇಜು,ಗಂಗಾವತಿ.

**ಮಾನ್ಯರೆ,**

**ವಿಷಯ:** 2018-19 ನೇ ಸಾಲಿನಲ್ಲಿ 10 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣ ಮಾಡಲು ಅಂದಾಜು ಪಟ್ಟಿ ಮತ್ತು ನಕ್ಷೆ ಸಲ್ಲಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ: ಇಡಿ 82 ಹೆಚ್‌ಪಿಯು 2018, ಬೆಂಗಳೂರು, ದಿನಾಂಕ: 13/08/2018.
2. ಸರ್ಕಾರದ ಪತ್ರ ಸಂಖ್ಯೆ: ಲೋಇ 369 ಬಿಎಂಎಸ್ 2018, ಬೆಂಗಳೂರು, ದಿನಾಂಕ: 02/08/2018.

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಪತ್ರದಲ್ಲಿ ದಿನಾಂಕ: 24/07/2018 ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಯ ಕ್ರಮ ಸಂಖ್ಯೆ: 16ರಲ್ಲಿನ ತಾಂತ್ರಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಸೂಕ್ತ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ವರದಿ/ಮಾಹಿತಿಯನ್ನು ನೀಡಲು ಸೂಚಿಸಲಾಗಿದೆ.

ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ದಿನಾಂಕ: 24/07/2018 ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಯ ಕ್ರಮ ಸಂಖ್ಯೆ: 16ರಲ್ಲಿ ಪ್ರಸ್ತಾಪಿಸಿರುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಕಟ್ಟಡ ಕುರಿತು ಪರಿಶೀಲಿಸಿ, ಸೂಕ್ತ ಪ್ರಸ್ತಾವನೆಯನ್ನು ಲೋಕೋಪಯೋಗಿ ಇಲಾಖೆಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಈ ದಿಸೆಯಲ್ಲಿ ತಮ್ಮ ಗಮನಕ್ಕೆ ತರಬಯಸುವುದೇನೆಂದರೆ, ಉಲ್ಲೇಖ (2)ರ ಸರ್ಕಾರದ ಪತ್ರದಲ್ಲಿ 2018-19 ನೇ ಸಾಲಿನ 10 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ತಲಾ ರೂ.5.00 ಕೋಟಿಗಳ ವೆಚ್ಚದಲ್ಲಿ ವಿದ್ಯಾರ್ಥಿನಿಲಯ ನಿರ್ಮಾಣ ಕಾಮಗಾರಿಯ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಿರುವುದರಿಂದ ತಮ್ಮ ಸಂಸ್ಥೆಗಳ ಆವರಣದಲ್ಲಿ **ಹೆಚ್ಚುವರಿ ಮೊತ್ತಕ್ಕೆ ಆಸ್ಪದ ನೀಡದಂತೆ ತಲಾ ರೂ.5.00 ಕೋಟಿಗಳ ಅಂದಾಜು ಮೊತ್ತದ ವೆಚ್ಚದಲ್ಲಿ ಎ.ಐ.ಸಿ.ಟಿ.ಇ ನಿಯಮಾನುಸಾರ ವಿದ್ಯಾರ್ಥಿನಿಲಯವನ್ನು ನಿರ್ಮಿಸಲು ಅಂದಾಜು ಪಟ್ಟಿ ಮತ್ತು ನಕ್ಷೆಗಳನ್ನು ತ್ರಿಪ್ರತಿಯಲ್ಲಿ ತಯಾರಿಸುವ ಸಲುವಾಗಿ ಲೋಕೋಪಯೋಗಿ ಇಲಾಖೆಗೆ ಪ್ರಸ್ತಾವನೆಯನ್ನು ಅತಿ ಜರೂರು** ಸಲ್ಲಿಸಲು ಹಾಗೂ ಸದರಿ ಅಂದಾಜು ಪಟ್ಟಿ ಮತ್ತು ನಕ್ಷೆಗಳನ್ನು ಆಡಳಿತಾತ್ಮಕ ಅನುಮೋದನೆಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ.

**ತಮ್ಮ ವಿಶ್ವಾಸಿ,**

ನಿರ್ದೇಶಕರು,
ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001.

ಪ್ರತಿ ಇವರಿಗೆ:

1. ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕರ್ನಾಟಕ ಸರ್ಕಾರ, ಕೊಠಡಿ ಸಂಖ್ಯೆ 317, 3ನೇ ಮಹಡಿ, ವಿಧಾನ ಸೌಧ, ಬೆಂಗಳೂರು 560 001 ಇವರ ಮಾಹಿತಿಗಾಗಿ.

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರ, ಬಹು ಮಹಡಿಗಳ ಕಟ್ಟಡ, ಬೆಂಗಳೂರು – 560 001 ಇವರ ಮಾಹಿತಿಗಾಗಿ.
3. ಶ್ರೀಮತಿ.ಅಪರ್ಣ ಪಾವಟೆ, ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001 ಇವರ ಮಾಹಿತಿಗಾಗಿ.
4. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ, ಕೆ.ಆರ್.ಪೇಟೆ, ಚಾಮರಾಜನಗರ, ಕುಶಾಲನಗರ, ಹಾವೇರಿ, ರಾಮನಗರ, ರಾಯಚೂರು, ಹೂವಿನಹಡಗಲಿ, ಕಾರವಾರ.- ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ಡಾ॥.ನಾಗರಾಜ.ಬಿ.ಪಾಟೀಲ್, ವಿಶೇಷಾಧಿಕಾರಿ/ಪ್ರಭಾರ ಪ್ರಾಂಶುಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ.- ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6. ಇ-ಆಡಳಿತ ವಿಭಾಗಕ್ಕೆ - ~~[illegible]~~ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.